
ಪ್ರಜಾವಾಣಿ



ಕರ್ನಾಟಕ ಸರ್ಕಾರ

AMBEDKAR DEVELOPMENT CORPORATION

75 ಸ್ವಾತಂತ್ರ್ಯದ ಅಮೃತ ಮಹೋತ್ಸವ



ಶ್ರೀ ಬಸವರಾಜ ಎಸ್. ಬೊಮ್ಮಾಯಿ
ಸನ್ಮಾನ್ಯ ಮುಖ್ಯಮಂತ್ರಿಗಳು

# ಡಾ. ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ

(ಕರ್ನಾಟಕ ಸರ್ಕಾರದ ಉದ್ಯಮ)

**2022–23ನೇ ಸಾಲಿನ ಪರಿಶಿಷ್ಟ ಜಾತಿಯ ಜನರ ಆರ್ಥಿಕ ಅಭಿವೃದ್ಧಿಗಾಗಿ ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಈ ಕೆಳಕಂಡ ಯೋಜನೆಗಳಿಗೆ ಫಲಾಪೇಕ್ಷಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.**

01 **ಉದ್ಯಮ ಶೀಲತಾ ಅಭಿವೃದ್ಧಿ ಯೋಜನೆ (ದ್ವಿ-ಚಕ್ರ/ತ್ರಿ-ಚಕ್ರ ಸರಕು ಸಾಗಾಣಿಕೆ ವಾಹನ)**

02 **ಮೈಕ್ರೋ ಕ್ರೆಡಿಟ್ (ಪ್ರೇರಣಾ) ಯೋಜನೆ (ಮಹಿಳಾ ಸ್ವ ಸಹಾಯ ಗುಂಪುಗಳಿಗೆ)**

## ಸೌಲಭ್ಯ ಪಡೆಯಲು ಇರಬೇಕಾದ ಸಾಮಾನ್ಯ ಅರ್ಹತೆಗಳು ಮತ್ತು ಷರತ್ತುಗಳು

- ಅರ್ಜಿದಾರರು ಪರಿಶಿಷ್ಟ ಜಾತಿಗೆ ಸೇರಿದವರಾಗಿರಬೇಕು ಹಾಗೂ ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು.
- ಅರ್ಜಿದಾರರ ಕುಟುಂಬದ ವಾರ್ಷಿಕ ಆದಾಯವು ಗ್ರಾಮೀಣ ಪ್ರದೇಶದಲ್ಲಿ ರೂ.1.50,000/– ಮತ್ತು ನಗರ ಪ್ರದೇಶದಲ್ಲಿ ರೂ.2,00,000/–ಗಳ ಮಿತಿಯಲ್ಲಿರಬೇಕು.
- ಉದ್ಯಮಶೀಲತಾ ಅಭಿವೃದ್ಧಿ ಯೋಜನೆಯಡಿ ಅರ್ಜಿದಾರರು ಕನಿಷ್ಟ 21 ವರ್ಷಗಳಿಂದ ಗರಿಷ್ಠ 50 ವರ್ಷದೊಳಗಿರಬೇಕು.
- ಮೈಕ್ರೊ ಕ್ರೆಡಿಟ್ (ಪ್ರೇರಣಾ) ಯೋಜನೆಯಡಿ ಅರ್ಜಿದಾರರು ಕನಿಷ್ಟ 21 ವರ್ಷಗಳಿಂದ ಗರಿಷ್ಠ 60 ವರ್ಷದೊಳಗಿರಬೇಕು.
- ಅರ್ಜಿದಾರರು ಅಥವಾ ಅವರ ಕುಟುಂಬದವರು ಈ ಹಿಂದೆ ನಿಗಮದಿಂದ ಯಾವುದೇ ಸೌಲಭ್ಯ ಪಡೆದಿರಬಾರದು ಮತ್ತು ಸರ್ಕಾರಿ / ಅರೆ ಸರ್ಕಾರಿ ಸಂಸ್ಥೆಯಲ್ಲಿ ನೌಕರಿಯಲ್ಲಿ ಇರಬಾರದು.
- ಉದ್ಯಮ ಶೀಲತಾ ಅಭಿವೃದ್ಧಿ ಯೋಜನೆಯಡಿ ಸ್ವಯಂ ಉದ್ಯೋಗಕ್ಕಾಗಿ ದ್ವಿ–ಚಕ್ರ / ತ್ರಿ–ಚಕ್ರ ಸರಕು ಸಾಗಾಣಿಕೆ ವಾಹನ ಉದ್ದೇಶಗಳಿಗೆ ಘಟಕ ವೆಚ್ಚದಲ್ಲಿ ರೂ.50,000/–ಗಳ ಸಹಾಯಧನ ಹಾಗೂ ಉಳಿದ ಮೊತ್ತ ಬ್ಯಾಂಕ್ ಸಾಲವನ್ನಾಗಿ ಅರ್ಜಿದಾರರು ಸೇವಾ ವ್ಯಾಪ್ತಿಯ ಬ್ಯಾಂಕ್‌ಗಳಿಂದ ಮಂಜೂರಾತಿ ಪಡೆಯುವ ಷರತ್ತಿಗೆ ಒಳಪಟ್ಟು ಸಹಾಯಧನವನ್ನು ಮಂಜೂರು ಮಾಡಲಾಗುತ್ತದೆ.
- ವಾಹನಗಳಿಗೆ ಸೌಲಭ್ಯ ಪಡೆಯಲು ಫಲಾಪೇಕ್ಷಿಗಳು ಡ್ರೈವಿಂಗ್ ಲೈಸೆನ್ಸ್ ಹೊಂದಿರಬೇಕು.
- ಮೈಕ್ರೋ ಕ್ರೆಡಿಟ್ (ಪ್ರೇರಣಾ) ಯೋಜನೆಯಡಿ ಕನಿಷ್ಟ 10 ಮಹಿಳೆಯರು ಸ್ವ–ಸಹಾಯ ಗುಂಪಿನಲ್ಲಿ ಸದಸ್ಯರಿರತಕ್ಕದ್ದು, ಸಂಘದ ಸದಸ್ಯರು ಬಿಪಿಎಲ್ ಪಡಿತರ ಚೀಟಿ ಮತ್ತು ಆಧಾರ್ ಕಾರ್ಡ್ ಹೊಂದಿರಬೇಕು.
- ಸ್ವ ಸಹಾಯ ಸಂಘಗಳು ಸಕ್ಷಮ ಪ್ರಾಧಿಕಾರಗಳಿಂದ ನೋಂದಣಿಯಾಗಿರಬೇಕು ಹಾಗೂ ಸಂಘದ ಹೆಸರಿನಲ್ಲಿ ಬ್ಯಾಂಕ್‌ನಲ್ಲಿ ಉಳಿತಾಯ ಖಾತೆ ಹೊಂದಿರಬೇಕು.
- ಸಂಘದಲ್ಲಿ ಒಬ್ಬ ಸದಸ್ಯರಿಗೆ ರೂ.25,000/– ರಂತೆ. (ರೂ.15,000/–ಸಹಾಯಧನ ಹಾಗೂ ರೂ.10,000/– ಸಾಲ) ಒಟ್ಟು 10 ಸದಸ್ಯರಿಗೆ ಒಟ್ಟು ರೂ.2.50 ಲಕ್ಷ ನೀಡಲಾಗುವುದು.




ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಬಸವರಾಜ ಎಸ್. ಬೊಮ್ಮಾಯಿಯವರೊಂದಿಗೆ ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸಚಿವರಾದ ಶ್ರೀ ಕೋಟ ಶ್ರೀನಿವಾಸ ಪೂಜಾರಿ ಅವರು ಇಲಾಖಾ ಕಾರ್ಯಕ್ರಮದಲ್ಲಿ ಪಾಲ್ಗೊಂಡಿರುವುದು.

**ಸೇವಾ ಸಿಂಧುವಿನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ :**
**20.11.2022ಕ್ಕೆ ನಿಗದಿಪಡಿಸಿದೆ**

**ಅರ್ಜಿಗಳನ್ನು ಸೇವಾ ಸಿಂಧು ಪೋರ್ಟಲ್ https://sevasindhu.karnataka.gov.in ನ ಗ್ರಾಮ ಒನ್, ಕರ್ನಾಟಕ ಒನ್ ಮತ್ತು ಬೆಂಗಳೂರು ಒನ್ ಕೇಂದ್ರದಲ್ಲಿ ಆನ್‌ಲೈನ್ ಮುಖಾಂತರ ಆಸಕ್ತರು ಮೇಲಿನ ಯೋಜನೆಗಳಿಗೆ ಅರ್ಜಿಗಳನ್ನು ಸಲ್ಲಿಸಿ ಸದುಪಯೋಗಪಡಿಸಿಕೊಳ್ಳಲು ಈ ಮೂಲಕ ಕೋರಲಾಗಿದೆ.**

ನಮ್ಮ ಸಂವಿಧಾನದಲ್ಲಿ ಪ್ರತಿಪಾದಿಸಿದಂತೆ, "ನಮ್ಮ ಸಂಯೋಜಿತ ಸಂಸ್ಕೃತಿಯ ಶ್ರೀಮಂತ ಪರಂಪರೆಯನ್ನು ಮೌಲ್ಯೀಕರಿಸುವುದು ಮತ್ತು ಸಂರಕ್ಷಿಸುವುದು" – ದೇಶದ ಪ್ರತಿಯೊಬ್ಬ ನಾಗರಿಕನ ಮೂಲಭೂತ ಕರ್ತವ್ಯವಾಗಿದೆ.

ಸಹಿ/–
ವ್ಯವಸ್ಥಾಪಕ ನಿರ್ದೇಶಕರು
ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ

9ನೇ ಮಹಡಿ, ವಿಶ್ವೇಶ್ವರಯ್ಯ ಚಿಕ್ಕಗೋಪುರ, ಡಾ. ಅಂಬೇಡ್ಕರ್ ವೀಧಿ, ಬೆಂಗಳೂರು–560001.
ದೂರವಾಣಿ ಸಂಖ್ಯೆ: 080–22868870, 22867097, 22865192,
ಫ್ಯಾಕ್ಸ್–080–22860396, e-mail:mdadcl2011@gmail.com